ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ 'ಬಿ+' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

**"ಕ್ರೀಡೆ & ಸಾಂಸ್ಕೃತಿಕ ಕಲೆಯಿಂದ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿ ಸಾಧ್ಯ– ಸುರೇಶ್‌ಕಂದಾವರಾ"**

ದಿನಾಂಕ:13.5.2025 ರಂದು ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ 2024-25ನೇ ಸಾಲಿನ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ ಸಮಾರಂಭವನ್ನು ಆಯೋಜಿಸಲಾಗಿತ್ತು.

ಚಾಮರಾಜನಗರ ಜಿಲ್ಲೆ ಯುವಜನ ಮತ್ತು ಕ್ರೀಡಾ ಅಧಿಕಾರಿಗಳಾದ ಶ್ರೀ ಸುರೇಶ್ ಕಂದಾವರಾ ಅವರು ಸಮಾರೋಪ ಭಾಷಣದಲ್ಲಿ ಮಾಡುತ್ತಾ ಭಾರತದ ಶ್ರೇಷ್ಠ ಹಾಕಿ ಆಟಗಾರ ಮೇಜರ್ ಧ್ಯಾನ್ ಚಂದ್‌ರವರ ಸ್ಮರಣಾರ್ಥವಾಗಿ ಪ್ರತಿ ವರ್ಷ ಆಗಸ್ಟ್ 29 ರಂದು ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಗುತ್ತದೆ. ಕ್ರೀಡೆಗಳು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗಿವೆ. ಕಲೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ವಿದ್ಯಾರ್ಥಿಗಳಲ್ಲಿ ಆಸಕ್ತಿ ಬೆಳೆಸಬೇಕು. ಕ್ರೀಡೆ ಜೀವನದಲ್ಲಿ ಶಿಸ್ತು & ಸಂಯಮವನ್ನು ಬೆಳೆಸುತ್ತದೆ. ಕ್ರೀಡೆಗಳಲ್ಲಿ ಭಾಗವಹಿಸಿ ಸಮಯದ ಸದುಪಯೋಗವನ್ನು ಪಡೆದು ದೇಶ ವಿದೇಶಗಳಲ್ಲಿ ಜಯಶಾಲಿಗಳಾಗಿ ಜೀವನದಲ್ಲಿ ಸಫಲರಾಗಬೇಕೆಂದು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ತುಂಬಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಚಾಮರಾಜನಗರ ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವರಾದ ಪ್ರೊ.ವಿ.ಜಿ. ವೆಂಕಟರಮಣರವರು ಮಾತನಾಡಿ ಕ್ರೀಡಾ ಚಟುವಟಿಕೆಗಳು ಜೀವನಕ್ಕೆ ಅತ್ಯವಶ್ಯಕ ಕ್ರೀಡೆಗಳಲ್ಲಿ ಭಾಗವಹಿಸುದರಿಂದ ದೈಹಿಕವಾಗಿ & ಮಾನಸಿಕವಾಗಿ ಆರೋಗ್ಯವಂತರಾಗಬಹುದು. ರಾಷ್ಟ್ರದ ಅಭಿವೃದ್ಧಿಯಲ್ಲಿ ಕ್ರೀಡೆಗಳು ಹೆಚ್ಚಿನ ಪಾತ್ರವಹಿಸುತ್ತವೆ. 'ಸೋಲೇ ಗೆಲುವಿನ ಮೆಟ್ಟಿಲು' ಎನ್ನುವ ರೀತಿ ಎಲ್ಲಾ ವಿದ್ಯಾರ್ಥಿನಿಯರು ಕ್ರೀಡೆ & ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಯಶಸ್ಸುಗಳಿಸಬೇಕೆಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯರಾದ ಡಾ.ಹೆಚ್.ಎಸ್. ಕೊಂಗಳಪ್ಪನವರು ಮಾತನಾಡಿ ಕ್ರೀಡೆಯಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳ ಭಾಗವಹಿಸಿವಿಕೆ ನಿಜಕ್ಕೂ ಹೆಮ್ಮೆ ಪಡುವ ವಿಚಾರವಾಗಿದೆ. ವರನಟ ಡಾ. ರಾಜ್‌ಕುಮಾರ್ ಹಾಗೆ ಸಾಂಸ್ಕೃತಿಕವಾಗಿ ಸಾಧನೆ ಮಾಡಿ ಹೆಸರುಗಳಿಸಬೇಕು ಎಲ್ಲಾ ವಿದ್ಯಾರ್ಥಿಗಳು ರಾಷ್ಟ್ರ & ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ತಿಳಿಸಿದರು. ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಸುಸಂಸ್ಕೃತರಾಗಲು ಸಾಧ್ಯ. ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ಚಟುವಟಿಕೆಗಳಲ್ಲಿ ಹೆಚ್ಚುಚ್ಚು ಭಾಗವಹಿಸಬೇಕೆಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಚಾಮರಾಜನಗರ ವಿಶ್ವವಿದ್ಯಾನಿಲಯದ ಆಡಳಿತ ವಿಭಾಗದ ಕುಲಸಚಿವರಾದ ಶ್ರೀ ಆರ್. ಲೋಕನಾಥ್ ಅವರು ಮಾತನಾಡಿ ಜೆಎಸ್‌ಎಸ್ ಸಂಸ್ಥೆಯು ಮಕ್ಕಳ ಪಠ್ಯ & ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿರುವುದು ಸಂತೋಷದಾಯಕ ವಿಚಾರವಾಗಿದೆ. ಜೀವನವೇ ಒಂದು ಸ್ಪರ್ಧೆಯಾಗಿದ್ದು, ವಿದ್ಯೆ ಎಂಬ ಮಳೆಯ ಹನಿಯಾಗಿ ಜ್ಞಾನವೆಂಬ ಮಹಸಾಗರವನ್ನು ಸೇರಿ ಸಮುದ್ರವಾಗುವ ರೀತಿ ಜೀವನಕ್ಕೆ ವಿದ್ಯೆ ಮತ್ತು ಜ್ಞಾನ ಎರಡೂ ಸಹ ಅತ್ಯವಶ್ಯಕ. ನಿಯಮಿತವಾಗಿ ಕ್ರೀಡೆಯಲ್ಲಿ ಭಾಗವಹಿಸಿ ಆರೋಗ್ಯ ಕಾಪಾಡಿಕೊಳ್ಳಬಹುದು. ಕ್ರೀಡೆಗಳು ಮಾನಸಿಕ ಸದೃಢತೆಯನ್ನು ಸುಧಾರಿಸಲು ಸಹಾಯ ಮಾಡುತ್ತವೆ. ಆದ್ದರಿಂದ ಕ್ರೀಡೆಗಳಲ್ಲಿ ಭಾಗವಹಿಸಿ ಯಶಸ್ಸುಗಳಿಸಿ ಎಂದು ಹೇಳಿದರು.

ಸಾಂಸ್ಕೃತಿಕ ವೇದಿಕೆ ಸಂಚಾಲಕರಾದ ಶ್ರೀಮತಿ ಆರ್. ಪಿ. ಸೌಮ್ಯ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಎಸ್. ಶ್ರೀಧರ್ ಉಪಸ್ಥಿತರಿದ್ದರು. ಸಭಾ ಕಾರ್ಯಕ್ರಮದ ನಂತರ ವಿದ್ಯಾರ್ಥಿನಿಯರು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿದರು.

ಚಾಮರಾಜನಗರ ಜಿಲ್ಲೆ ಯುವಜನ ಮತ್ತು ಕ್ರೀಡಾ ಅಧಿಕಾರಿಗಳಾದ ಶ್ರೀ ಸುರೇಶ್ ಕಂದಾವರಾ ಅವರು ಸಮಾರೋಪ ಭಾಷಣ ಮಾಡುತ್ತಿರುವುದು. ಚಿತ್ರದಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಎಸ್. ಶ್ರೀಧರ್‌ರವರು, ಚಾಮರಾಜನಗರ ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವರಾದ ಪ್ರೊ.ವಿ.ಜಿ. ವೆಂಕಟರಮಣರವರು, ಚಾಮರಾಜನಗರ ವಿಶ್ವವಿದ್ಯಾನಿಲಯದ ಆಡಳಿತ ವಿಭಾಗದ ಕುಲಸಚಿವರಾದ ಶ್ರೀ ಆರ್. ಲೋಕನಾಥ್‌ರವರು ಹಾಗೂ ಪ್ರಾಚಾರ್ಯರಾದ ಡಾ.ಹೆಚ್.ಎಸ್. ಕೊಂಗಳಪ್ಪರವರು.

